# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 772
ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್. ವ್ಹಿ ಸಂಕನೂರು (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 12.12.2025
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶ್ರೀ ಕುಮಾರ್ ನಾಯಕ್ ವರದಿಯಂತೆ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಹಾಗೂ ಉಪನ್ಯಾಸಕರಿಗೆ ಈಗಾಗಲೇ 2016 ರಿಂದ ಒಂದು ಇನ್ಕ್ರಿಮೆಂಟ್‌ನ್ನು ವಸತಿ ಶಾಲೆಗಳ ಶಿಕ್ಷಕರಿಗೆ ನೀಡಲಾಗಿಲ್ಲ ಎಂಬುದು ನಿಜವೇ; | ಹೌದು.<br>ಶ್ರೀ. ಜಿ. ಕುಮಾರ ನಾಯಕ, ಭಾ.ಆ.ಸೇ., ಅಂದಿನ ಸರ್ಕಾರದ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆರವರ ವರದಿಯನ್ವಯ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಿ ಆದೇಶ ಹೊರಡಿಸಿರುವ ಮಾದರಿಯಲ್ಲಿಯೇ ವಸತಿ ಶಾಲಾ ಶಿಕ್ಷಕರುಗಳಿಗೂ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು.<br>ಸರ್ಕಾರದ ಪತ್ರ ಸಂಖ್ಯೆ: ಸಕಇ 144 ಮೊದೇಶಾ 2017 ರಲ್ಲಿ ಈ ಕೆಳಕಂಡ ಕಾರಣಗಳಿಂದ ಸದರಿ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ದಿನಾಂಕ:27.08.2019ರ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ತಿಳಿಸಿರುತ್ತದೆ. |
| ಆ) | ಇನ್ಕ್ರಿಮೆಂಟ್ ನೀಡದೇ ಇದ್ದಲ್ಲಿ ಕಾರಣಗಳೇನು: (ವಿವರ ನೀಡುವುದು) ಮತ್ತು ಈ ಕುರಿತು ಕೈಗೊಂಡ ಕ್ರಮಗಳೇನು? | 1) ಶ್ರೀ. ಜಿ. ಕುಮಾರ ನಾಯಕ ಸಮಿತಿಯ ಶಿಫಾರಸ್ಸಿನಂತೆ ಶಿಕ್ಷಣ ಇಲಾಖೆಯ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಶಿಕ್ಷಕರುಗಳಿಗೆ ಮಾತ್ರ ಸಂಬಂಧಿಸಿದ್ದಾಗಿರುತ್ತದೆ. ಅಂದರೆ, 8ನೇ ತರಗತಿಯಿಂದ 12ನೇ ತರಗತಿಯವರೆಗೆ ಬೋಧನೆ ಮಾಡುವ ಶಿಕ್ಷಕರುಗಳಿಗೆ ಮಾತ್ರ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಾತ್ರ ದಿನಾಂಕ:01.06.2016 ರಿಂದ ಮಂಜೂರು ಮಾಡಲಾಗಿರುತ್ತದೆ. ಆದರೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳು 6 ರಿಂದ 10ನೇ ತರಗತಿಯ ವರೆಗೆ ಮಾತ್ರ ಇರುತ್ತದೆ.<br>2) ಶ್ರೀ. ಜಿ. ಕುಮಾರ ನಾಯಕ ಸಮಿತಿಯ ಶಿಫಾರಸ್ಸಿನಂತೆ ಶಿಕ್ಷಣ ಇಲಾಖೆಯ ಪ್ರೌಢ ಶಿಕ್ಷಣ ವಿಭಾಗದ ಶಿಕ್ಷಕರುಗಳಿಗೆ (8 ರಿಂದ 12ನೇ ತರಗತಿ) ಮಂಜೂರು ಮಾಡಲಾದ ಹೆಚ್ಚುವರಿ ವೇತನ ಬಡ್ತಿಯನ್ನು, 2012ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಮಂಜೂರು ಮಾಡಲಾಗಿರುತ್ತದೆ. ಪ್ರಸ್ತುತ 2012ರ ಪರಿಷ್ಕೃತ ವೇತನ ಶ್ರೇಣಿಗಳು ಚಾಲ್ತಿಯಲ್ಲಿರುವುದಿಲ್ಲವಾದ್ದರಿಂದ ಇಲಾಖೆ ಬೇಡಿಕೆಯಂತೆ ಹೆಚ್ಚುವರಿ ವೇತನವನ್ನು ಈ ಹಂತದಲ್ಲಿ ಪರಿಗಣಿಸಿ ಅದನ್ನು 2012ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಪರಿಗಣಿಸಿ ಮಂಜೂರು ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br>3) ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ದಾಖಲಾಗಿದ್ದ ನ್ಯಾಯಾಂಗ ನಿಂದನಾ ಅರ್ಜಿ ವಿಚಾರಣೆ ಸಂದರ್ಭದಲ್ಲಿಯೂ ಸಹ ಸರ್ಕಾರವು ವಸತಿ ಶಾಲೆ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲವೆಂದು ಹೇಳಿಕೆ ಸಲ್ಲಿಸಿರುತ್ತದೆ.<br>4) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ ಮತ್ತು ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ಬೇರೆ ಬೇರೆಯಾಗಿದ್ದು, ಒಂದರ ನಿಯಮವನ್ನು ಮತ್ತೊಂದಕ್ಕೆ ಹೋಲಿಸಿ ಅನ್ವಯಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಎಂದು ತಿಳಿಸಿರುತ್ತದೆ. |

...2.

| | | |
|---|---|---|
| | | 2018ರ ಪರಿಷ್ಕೃತ ವೇತನ ಶ್ರೇಣಿ ನಿಯಮಗಳ ಜಾರಿಯಿಂದಾಗಿ ಹಾಗೂ 2012ರ ಪರಿಷ್ಕೃತ ವೇತನ ಶ್ರೇಣಿ ನಿಯಮಗಳು ಮತ್ತು ದಿನಾಂಕ:15-04-2016ರ ಹೆಚ್ಚುವರಿ ವೇತನ ಬಡ್ತಿ ಮಂಜೂರಾತಿ ಆದೇಶಗಳು ಪ್ರಸ್ತುತ ಅಸ್ತಿತ್ವದಲ್ಲಿ ಇಲ್ಲದಿರುವುದರಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ನೀಡುತ್ತಿದ್ದ ವೇತನ ಬಡ್ತಿಯನ್ನು ಮಂಜೂರು ಮಾಡಲು ಬರುವುದಿಲ್ಲ.<br>ಮುಂದುವರೆದು, ಶ್ರೀ.ಜಿ.ಕುಮಾರ ನಾಯಕ ಸಮಿತಿಯ ಶಿಫಾರಸ್ಸಿನಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡುವ ಕುರಿತು 84ನೇ ಆಡಳಿತ ಮಂಡಳಿಯ ಸಭೆಯ ತೀರ್ಮಾನದಂತೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |
| **ಇ)** | ವಸತಿ ಶಾಲೆಗಳಲ್ಲಿ ಸಹ ಶಿಕ್ಷಕರಿಗೆ ಸುಮಾರು 13 ವರ್ಷಗಳಿಂದ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡದೇ ಇರಲು ಕಾರಣಗಳೇನು; ಈ ಕುರಿತು ಸರ್ಕಾರ ಏನು ಸರ್ಕಾರ ಕ್ರಮ ಕೈಗೊಂಡಿದೆ; ಅದು ಯಾವ ಹಂತದಲ್ಲಿ? | 2009-10ನೇ ಸಾಲಿನಲ್ಲಿ 26 ಪದವಿ ಪೂರ್ವ ವಸತಿ ಕಾಲೇಜುಗಳನ್ನು ಮಂಜೂರು ಮಾಡಿದ್ದು, ಪ್ರತಿ ಕಾಲೇಜಿಗೆ 7 ಉಪನ್ಯಾಸಕರ ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. 26 ಪದವಿ ಪೂರ್ವ ವಸತಿ ಕಾಲೇಜುಗಳಿಗೆ ಮಂಜೂರಾದ 182 ಹುದ್ದೆಗಳನ್ನು ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲಾಗಿರುತ್ತದೆ.<br>2017-18ನೇ ಸಾಲಿನ ಆಯವ್ಯಯದಲ್ಲಿ ಪ್ರತಿ ಜಿಲ್ಲೆಗೆ ಒಂದರಂತೆ 30 ವಸತಿ ಶಾಲೆಗಳನ್ನು ಕಾಲೇಜುಗಳನ್ನಾಗಿ ಉನ್ನತೀಕರಿಸಲಾಗಿರುತ್ತದೆ. ಈ ಪೈಕಿ, 20 ಉನ್ನತೀಕರಿಸಿದ ಕಾಲೇಜುಗಳಿಗೆ ಪ್ರತಿ ಕಾಲೇಜಿಗೆ 6 ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಲಾಗಿರುತ್ತದೆ ಹಾಗೂ ಉಳಿದ 10 ಉನ್ನತೀಕರಿಸಿದ ಕಾಲೇಜುಗಳಿಗೆ ಉಪನ್ಯಾಸಕರ ಹುದ್ದೆಗಳನ್ನು ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ-2025ರಲ್ಲಿ ಸೇರ್ಪಡೆ ಮಾಡಿಕೊಂಡು ಸದರಿ ಉಪನ್ಯಾಸಕರ ಹುದ್ದೆಗಳನ್ನು ಶೇ.75 ರಷ್ಟು ಶಿಕ್ಷಕರ ವೃಂದದಿಂದ ಮುಂಬಡ್ತಿ ಮುಖಾಂತರ ಉಳಿದ ಶೇ.25 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ ಮುಂಬಡ್ತಿ ನೀಡಲು ಕ್ರಮವಹಿಸಲಾಗುತ್ತಿದೆ. |

ಸಕಇ-ಎಂಡಿಎಸ್/277/2025

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು